## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಲೆಕ್ಕ ಶೀರ್ಷಿಕೆ-3054ರಡಿ ಮಂಡ್ಯ ಜಿಲ್ಲೆ ಪಾಂಡವಪುರ ತಾಲ್ಲೂಕು ವ್ಯಾಪ್ತಿಯ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:** ಆರ್ಥಿಕ ಇಲಾಖೆಯ ಟಿಪ್ಪಣಿ ಕಂಡಿಕೆ ಸಂಖ್ಯೆ:ಆಇ 190 ವೆಚ್ಚ-6/2017 ದಿನಾಂಕ:22-3-2017.

**ಪ್ರಸ್ತಾವನೆ:**

ಮುಖ್ಯ ಮಂತ್ರಿ ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆ ಲೆಕ್ಕ ಶೀರ್ಷಿಕೆ-3054 ರಡಿ ಮಂಡ್ಯ ಜಿಲ್ಲೆ ಪಾಂಡವಪುರ ತಾಲ್ಲೂಕು ವ್ಯಾಪ್ತಿಯ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ತುರ್ತಾಗಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಿ ಅನುದಾನ ಬಿಡುಗಡೆಗೊಳಿಸುವಂತೆ ಬಂದಿರುವ ಪ್ರಸ್ತಾವನೆಯನ್ನು ಗಮನಿಸಿದೆ.

ಮೇಲೆ ಓದಲಾದ ಆರ್ಥಿಕ ಇಲಾಖೆಯ ಕಂಡಿಕೆ ಟಿಪ್ಪಣಿ ಸಂಖ್ಯೆ:ಆಇ 190 ವೆಚ್ಚ-6/2017 ದಿನಾಂಕ: 22-3-2017ರಲ್ಲಿ ಮಾನ್ಯ ಲೋಕಸಭಾ ಸದಸ್ಯರು ಮಂಡ್ಯ ಜಿಲ್ಲೆ ರವರ ಕೋರಿಕೆಯಂತೆ, ಪಾಂಡವಪುರ ತಾಲ್ಲೂಕಿನ ಮತಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ರಸ್ತೆ ಕಾಮಗಾರಿಗಳನ್ನು ಕೈಗೊಳ್ಳಲು ರೂ.150.00 ಲಕ್ಷಗಳನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ ಹೆಚ್ಚುವರಿ ಅನುದಾನ ಬಿಡುಗಡೆ ಮಾಡಲು ಇಲಾಖೆಗೆ ಸೂಚಿಸಲಾಗಿದೆ, ಮಾನ್ಯ ಮುಖ್ಯ ಮಂತ್ರಿಯವರ ಆದೇಶದ ಹಿನ್ನೆಲೆಯಲ್ಲಿ ಈ ಕಾಮಗಾರಿಯನ್ನು ತೆಗೆದುಕೊಳ್ಳಲು ಅಗತ್ಯ ಕ್ರಮ ವಹಿಸಿ, ಕಾಮಗಾರಿಯ ಪ್ರಗತಿಯನ್ನಾಧರಿಸಿ 2017-18ನೇ ಸಾಲಿನ ಆಯವ್ಯಯದಲ್ಲಿ ಒದಗಿಸಲಾಗುವ ಅನುದಾನದಲ್ಲಿ ಕ್ರಮ ತೆಗೆದುಕೊಳ್ಳುವಂತೆ ತಿಳಿಸಿರುತ್ತದೆ.

ಮುಖ್ಯ ಮಂತ್ರಿ ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆ ಲೆಕ್ಕ ಶೀರ್ಷಿಕೆ-3054ರಡಿ ಮಂಡ್ಯ ಜಿಲ್ಲೆ ಪಾಂಡವಪುರ ತಾಲ್ಲೂಕು ವ್ಯಾಪ್ತಿಯ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ತೀರ್ಮಾನಿಸಿರುತ್ತದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:98:ಆರ್‌ಆರ್‌ಸಿ:2017, ಬೆಂಗಳೂರು, ದಿನಾಂಕ:25-3-2017**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿ ಮಂಡ್ಯ ಜಿಲ್ಲೆ ಪಾಂಡವಪುರ ತಾಲ್ಲೂಕು ವ್ಯಾಪ್ತಿಯ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಲೆಕ್ಕ ಶೀರ್ಷಿಕೆ-3054ರಡಿ **ರೂ.150.00 ಲಕ್ಷಗಳ** (ರೂಪಾಯಿಗಳು ಒಂದುನೂರ ಐವತ್ತು ಲಕ್ಷಗಳು ಮಾತ್ರ) ಅನುದಾನದಲ್ಲಿ ಮಂಡ್ಯ ಜಿಲ್ಲೆ ಪಾಂಡವಪುರ ತಾಲ್ಲೂಕು ವ್ಯಾಪ್ತಿಯ ಕೆಳಕಂಡ ಪ್ರಸ್ತಾವಿತ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಮಂಡ್ಯ ಜಿಲ್ಲಾ ಪಂಚಾಯತಿಗೆ ಷರತ್ತುಗಳಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

| ಕ್ರಸಂ | ಕಾಮಗಾರಿ ಹೆಸರು | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 1 | ಪಾಂಡವಪುರ ತಾಲ್ಲೂಕಿನ ಕಣಿವೇಕೊಪ್ಪಲು ಗ್ರಾಮದ ಗ್ರಾಮ ಪರಿಮಿತಿಯಲ್ಲಿ ರಸ್ತೆ ಅಭಿವೃದ್ಧಿ | 40.00 |
| 2 | ಪಾಂಡವಪುರ ತಾಲ್ಲೂಕಿನ ದೊಡ್ಡಬ್ಯಾಡರಹಳ್ಳಿ ಗ್ರಾಮದ ಗ್ರಾಮ ಪರಿಮಿತಿಯಲ್ಲಿ ರಸ್ತೆ ಅಭಿವೃದ್ಧಿ | 40.00 |
| 3 | ಪಾಂಡವಪುರ ತಾಲ್ಲೂಕಿನ ಬಿಂಡಹಳ್ಳಿ ಗ್ರಾಮದ ಗ್ರಾಮ ಪರಿಮಿತಿಯಲ್ಲಿ ರಸ್ತೆ ಅಭಿವೃದ್ಧಿ | 50.00 |
| 4 | ಪಾಂಡವಪುರ ತಾಲ್ಲೂಕಿನ ಚಿನಕುರಳಿ-ಮೇಲುಕೋಟೆ ರಸ್ತೆಯಿಂದ ಶ್ರೀರಂಗಪಟ್ಟಣ ಅರಸೀಕೆರೆ ಸೇರುವ ರಸ್ತೆ ಅಭಿವೃದ್ಧಿ | 20.00 |
| | **ಒಟ್ಟು:** | **150.00** |

Non plan

**ಷರತ್ತುಗಳು:**

1. ಮಂಡ್ಯ ಜಿಲ್ಲೆ ಪಾಂಡವಪುರ ತಾಲ್ಲೂಕು ವ್ಯಾಪ್ತಿಯ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ತುರ್ತು ಹಾಗೂ ಅಗತ್ಯತೆ ಆಧಾರದ ಮೇರೆಗೆ ಹಂಚಿಕೆ ಮಿತಿಗೊಳಪಟ್ಟು ಕ್ರೆಡಿಲ್ ವಿಭಾಗದಿಂದ ಅನುಷ್ಠಾನಗೊಳಿಸತಕ್ಕದ್ದು.

2. ಈ ಆದೇಶದಲ್ಲಿ ಅನುಮೋದಿಸಿರುವ ಕಾಮಗಾರಿಯನ್ನು ಜಿಲ್ಲಾ ಪಂಚಾಯತಿ/ಕೆಆರ್‌ಐಡಿಎಲ್, ಇತರೆ ಯೋಜನೆಯಡಿ/ಕಾರ್ಯಕ್ರಮದಡಿ/ಲೆಕ್ಕ ಶೀರ್ಷಿಕೆಯಡಿ ಯಾವುದೇ ಕಾರಣಕ್ಕೂ ಪುನರಾವರ್ತನೆ ಯಾಗಿರುವುದಿಲ್ಲವೆಂಬ ಅಂಶವನ್ನು ದೃಢಪಡಿಸಿಕೊಳ್ಳತಕ್ಕದ್ದು.

3. ಕರ್ನಾಟಕ ಪಾರದರ್ಶಕತೆ ನಿಯಮ 4 ಜಿ ವಿನಾಯಿತಿ ಇಲ್ಲದಿದ್ದಲ್ಲಿ ಕಾಮಗಾರಿಗಳನ್ನು ಕರ್ನಾಟಕ ಪಾರದರ್ಶಕತೆ ಕಾಯಿದೆ ಪ್ರಕಾರ ಟೆಂಡರ್ ಕರೆದು ನಿರ್ವಹಿಸುವುದು.

4. ಈ ಆದೇಶದಲ್ಲಿ ಅನುಮೋದಿಸಿರುವ ಕಾಮಗಾರಿಯ ಅಂದಾಜನ್ನು ನಿಯಮಾನುಸಾರ **IRC ಮತ್ತಿತರೆ ತತ್ಸಮಾನ ತಾಂತ್ರಿಕ ನಿಬಂಧನೆಗಳಂತೆ ಪರಿಶೀಲನೆಗೆ ಒಳಪಡಿಸಿ ಸೂಕ್ತ ಪ್ರಾಧಿಕಾರದಿಂದ ಅನುಮೋದನೆ ಪಡೆಯತಕ್ಕದ್ದು.** ಕಾಮಗಾರಿಯನ್ನು ಪ್ರಾರಂಭಿಸುವ ಮುನ್ನ ಮತ್ತು ಮುಕ್ತಾಯದ ನಂತರ ರಸ್ತೆಯ ಸನ್ನಿವೇಶದ ಛಾಯಾ ಚಿತ್ರಗಳನ್ನು ತೆಗೆದು ವೆಬ್‌ಸೈಟ್ ನಲ್ಲಿ ಅಳವಡಿಸತಕ್ಕದ್ದು.

5. ಪ್ರಸ್ತುತ ಈ ಶೀರ್ಷಿಕೆಯಡಿ ಜಿಲ್ಲಾ ಪಂಚಾಯತಿ ಅನುಷ್ಠಾನಗೊಳಿಸಿರುವ ಹೆಚ್ಚುವರಿ ರಸ್ತೆ ಕಾಮಗಾರಿಯನ್ನು worksoft works monitoring ಪದ್ಧತಿ ಮುಖಾಂತರ ಉಸ್ತುವಾರಿ ಮಾಡಬೇಕಾಗಿದ್ದು, ಈ ಸಂಬಂಧ ಪೂರ್ಣ ಮಾಹಿತಿಯನ್ನು worksoft website ನಲ್ಲಿ ತಪ್ಪದೇ ಅಳವಡಿಸತಕ್ಕದ್ದು.

6. ಕಾಮಗಾರಿಯ ಗುಣಮಟ್ಟ ಪರೀಕ್ಷೆಯನ್ನು ಕೆಆರ್‌ಆರ್‌ಡಿಎ ವತಿಯಿಂದ ನಿಗಧಿಪಡಿಸಿರುವ DQm/SQM ಗಳಿಂದ ಪರಿವೀಕ್ಷಣೆ ಮಾಡಿಸತಕ್ಕದ್ದು.

7. ಕಾಮಗಾರಿಯನ್ನು 3rd party /SQM/DQM ರವರಿಂದ ತಪಾಸಣೆಗೆ ಒಳಪಡಿಸತಕ್ಕದ್ದು.

8. 2014-15ನೇ ಸಾಲಿನಿಂದ ಇಲಾಖೆಯಲ್ಲಿ ಅನುಷ್ಠಾನಗೊಳಿಸುತ್ತಿರುವ ಅನುಮೋದನೆಗೊಂಡ ಕ್ರಿಯಾ ಯೋಜನೆಯಲ್ಲಿರುವ ಎಲ್ಲಾ ಯೋಜನೆಗಳ ಎಲ್ಲಾ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿ, ಹಣ ಪಾವತಿಯನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಿಂದ ಪಡೆಯಲಾದ ಪಾವತಿ ಆದೇಶವಿದ್ದಲ್ಲಿ ಮಾತ್ರ ಕಾಮಗಾರಿಗಳ ಬಿಲ್ಲುಗಳ ಪಾವತಿಯನ್ನು ಕಡ್ಡಾಯವಾಗಿ ಮಾಡುವಂತೆ ಹಾಗೂ ಸರ್ಕಾರದ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಈಗಾಗಲೇ ಸೂಚಿಸಲಾಗಿದೆ. ಅದರಂತೆ, ಪ್ರಸ್ತುತ ಈ ಆದೇಶದಲ್ಲಿ ಅನುಮೋದಿಸಿರುವ ಕಾಮಗಾರಿಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಕಡ್ಡಾಯವಾಗಿ ಅಳವಡಿಸುವ ನಿಬಂಧನೆಗೊಳಪಡಿಸಿದೆ.

9. ಈ ಆದೇಶದಂತೆ ಜಿಲ್ಲಾ ಪಂಚಾಯತಿ/ಕೆಆರ್‌ಐಡಿಎಲ್ ಅನುಷ್ಠಾನಗೊಳಿಸಿದ ಕಾಮಗಾರಿಗಳಿಗೆ ತಾಲ್ಲೂಕುವಾರು ಭೌತಿಕ ಮತ್ತು ಆರ್ಥಿಕ ಪ್ರಗತಿ ವರದಿಯನ್ನು ಪ್ರತಿ ಮಾಹೆ ಮುಖ್ಯ ಇಂಜಿನಿಯರ್,

ಪಂ.ರಾಜ್ ಇಂಜಿನಿಯರಿಂಗ್ ಇಲಾಖೆ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ ರವರ ಮುಖಾಂತರ ಸರ್ಕಾರಕ್ಕೆ ನೀಡುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 190 ವೆಚ್ಚ-6/2017 ದಿನಾಂಕ:22-3-2017ರ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಾ.ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು:

1. ಮಹಾಲೇಖಪಾಲರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1), ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು
6. ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
7. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (PMU)(IF),5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು
8. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
9. ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ಇಲಾಖೆ,ಬೆಂಗಳೂರು.
10. ವಿಶೇಷಾಧಿಕಾರಿಗಳು (ಜಿಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ ವಿಧಾನ ಸೌಧ, ಬೆಂಗಳೂರು
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
12. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
13. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಟ್ರೆಜರಿ ಡಿಪಾರ್ಟ್‌ಮೆಂಟ್, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
14. ಜಿಲ್ಲಾ ಖಜಾನಾಧಿಕಾರಿಗಳು, ಮಂಡ್ಯ
15. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ. ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
16. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು-9
17. ವ್ಯವಸ್ಥಾಪಕ ನಿರ್ದೇಶಕರು, ಕ್ರೆಡಿಲ್ ಸಂಸ್ಥೆ, ಬೆಂಗಳೂರು.
18. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್, ಮಂಡ್ಯ
19. ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಮೈಸೂರು
20. ಕಾರ್ಯಪಾಲಕ ಇಂಜಿನಿಯರ್. ಪಂ.ರಾಜ್ ಇಂಜಿನಿಯರಿಂಗ್ ವಿಭಾಗ / ಕ್ರೆಡಿಲ್ ವಿಭಾಗ, ಮಂಡ್ಯ
21. ಮಾಹಿತಿ ಕೇಂದ್ರದ ಗಣಕ ಕೋಶ ಮುಖ್ಯಸ್ಥರು, ಗ್ರಾಅಪಂರಾ ಇಲಾಖೆ ಇವರಿಗೆ ಇಲಾಖೆಯ ಅಂತರ್ಜಾಲದಲ್ಲಿ ಅಳವಡಿಸಲು ಹಾಗೂ ಗ್ರೂಪ್ ಮೇಲ್ ನಲ್ಲಿ ರವಾನಿಸಲು ಸೂಚಿಸಿದೆ
22. ರಕ್ಷಾ ಕಡತ / ಹೆಚ್ಚುವರಿ ಪ್ರತಿ.

Non plan